(17)

<u>ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಕೆ.ಟಿ.ಶ್ರೀಕಂಠೇಗೌಡ, ಇವರು ನಿಯಮ-330ರ ಮೇರೆಗೆ ನೀಡಿರುವ ಸೂಚನಾ ಪತ್ರಕ್ಕೆ ಉತ್ತರ.</u>

**ವಿಷಯ:-**

ರಾಜ್ಯದಲ್ಲಿ ಖಾಸಗಿ ಅನುದಾನ ಶಾಲಾ ಶಿಕ್ಷಕರುಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರುಗಳ "ಕಾಲ್ಪನಿಕ ವೇತನ ಬಡ್ತಿ" ಬಗ್ಗೆ ಮಾನ್ಯ ಶ್ರೀ ಬಸವರಾಜ ಹೊರಟ್ಟಿರವರ ನೇತೃತ್ವದಲ್ಲಿ ರಚಿಸಲಾದಂತಹ ಸಮಿತಿಯ ವರದಿ ಮತ್ತು ಸದರಿ ವರದಿಯ ಜಾರಿ ಮಾಡಬೇಕಾಗಿರುವ ವಿಷಯವನ್ನು ಸದನದಲ್ಲಿ ಪ್ರಸ್ತಾಪಿಸಿರುತ್ತಾರೆ.

**ಉತ್ತರ:-**

ಕಾಲ್ಪನಿಕ ವೇತನ ಕುರಿತಂತೆ ಶ್ರೀ ಬಸವರಾಜ ಹೊರಟ್ಟಿ, ಮಾನ್ಯ ವಿಧಾನ ಪರಿಷತ್ ಸದಸ್ಯರು ಇವರ ನೇತೃತ್ವದಲ್ಲಿನ ಸಮಿತಿಯು ದಿನಾಂಕ:15.07.2015 ಮತ್ತು ದಿನಾಂಕ:06.02.2018ರಂದು ಎರಡು ವರದಿಗಳನ್ನು ಸಲ್ಲಿಸಿರುತ್ತಾರೆ. ವರದಿಯು ಸರ್ಕಾರದ ಹಂತದಲ್ಲಿ ಪರಿಶೀಲನೆಯಲ್ಲಿರುತ್ತದೆ.

**ಸಮಿತಿಯ ಶಿಫಾರಸ್ಸುಗಳು**

ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ ಆರ್ಥಿಕ ಅಂಕಿ-ಅಂಶಗಳು ಸರಿಯಾಗಿದೆಯೆಂದು ಖಾಸಗಿ ಅನುದಾನಿತ ಸಿಬ್ಬಂದಿಯವರಿಗೆ ಕಾಲ್ಪನಿಕ ವೇತನ ನಿಗದಿಪಡಿಸುವ ಸಂಬಂಧವಾಗಿ ಮರು ಪರಿಶೀಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಯ ಶಿಫಾರಸ್ಸುಗಳು ಈ ಕೆಳಕಂಡಂತಿವೆ.

ಅ) ಖಾಸಗಿ ಅನುದಾನಿತ ಶಿಕ್ಷಣ ಸಂಸ್ಥೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅನುದಾನಿತ ಸಿಬ್ಬಂದಿಯವರಿಗೆ ಕಾಲ್ಪನಿಕ ವೇತನ ನಿಗಧಿಮಾಡಿ, ವೇತನವನ್ನು ಪುನರ್ ನಿಗಧಿಪಡಿಸಿ ವೇತನ ಸೌಲಭ್ಯವನ್ನು ಹಾಗೂ ಪಿಂಚಣಿ, ಗ್ರಾಚ್ಯುಟಿ ಸೌಲಭ್ಯವನ್ನು ನೀಡುವುದು;

ಆ) ಅನುದಾನರಹಿತ ಅವಧಿಯನ್ನು ಪರಿಗಣಿಸಿ ಪದೋನ್ನತಿ, Time Bond ಹಾಗೂ ಪ್ಲೇಸ್‌ಮೆಂಟ್ ಸೌಲಭ್ಯವನ್ನು ನೀಡುವುದು;

ಇ) ಕಾಲ್ಪನಿಕ ವೇತನ ನಿಗದಿಪಡಿಸಿದ ನಂತರ ಯಾವುದೇ ನೌಕರರು ಹಿಂದಿನ ಯಾವುದೇ ಬಾಕಿಯನ್ನು ಕೇಳುವಂತಿಲ್ಲ;

ಈ) ನ್ಯಾಯಾಲಯದಲ್ಲಿ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ದಾವೆ ಹೂಡಿರುವವರು ತಮ್ಮ ಪ್ರಕರಣಗಳನ್ನು ವಾಪಸ್ ಪಡೆದಲ್ಲಿ, ಈ ಸೌಲಭ್ಯಕ್ಕೆ ಅರ್ಹರಿರುತ್ತಾರೆಂಬ ಅಂಶವನ್ನು ಇಲಾಖೆಯ ಆದೇಶದಲ್ಲಿ ಸ್ಪಷ್ಟಪಡಿಸುವುದು;

ಉ) ಈಗಾಗಲೇ ಈ ಸೌಲಭ್ಯವನ್ನು ಪಡೆಯುತ್ತಿರುವವರಿಗೆ ಯಥಾವತ್ತಾಗಿ ಮುಂದುವರೆಸುವುದು ಹಾಗೂ ಈಗಾಗಲೇ ಆರ್ಥಿಕ ಸೌಲಭ್ಯಗಳನ್ನು ಪಡೆದು ನಿವೃತ್ತಿ ಆಗಿರುವ/ಆಗಲಿರುವ ನೌಕರರಿಗೆ ಯಾವುದೇ ರೀತಿಯ ಆರ್ಥಿಕ ಕಡಿತವನ್ನು ಮಾಡಬಾರದು. ನಿವೃತ್ತಿ ವೇತನ ನಿಗದಿಪಡಿಸುವಾಗ ಅನುದಾನರಹಿತ ಅವಧಿಯನ್ನು ಕಡಿತಗೊಳಿಸಿ ಪುನರ್ ನಿಗದಿಪಡಿಸಬಾರದು;

ಊ) ನಿವೃತ್ತರಾಗುತ್ತಿರುವವರಿಗೆ ನಿವೃತ್ತಿ ಉಪದನವನ್ನು ಕಡಿತಗೊಳಿಸದಂತೆ ಸರ್ಕಾರಿ ಆದೇಶ ಹೊರಡಿಸುವುದು.

ಅನುದಾನ ಸಂಹಿತೆಯ ಪ್ರಕಾರ ಅನುದಾನಕ್ಕೊಳಪಟ್ಟ ಸಿಬ್ಬಂದಿಗೆ ಅನುದಾನ ದೊರೆತ ದಿನಾಂಕದಿಂದ ಮಾತ್ರ ಕನಿಷ್ಠ ವೇತನ ನಿಗಧಿ ಮಾಡಬೇಕಿದ್ದು, ಹಿಂದಿನ ಸೇವಾವಧಿಯನ್ನು ಯಾವುದೇ ಸೇವಾ ಸೌಲಭ್ಯಕ್ಕೆ ಪರಿಗಣಿಸುವಂತಿಲ್ಲ. ಈ ಸಂಬಂಧ ಸರ್ಕಾರವು ದಿನಾಂಕ:01.06.1995 ರಿಂದಲೇ ಪೂರ್ವಾನ್ವಯವಾಗಿ

ಜಾರಿಗೆ ಬರುವಂತೆ ಕರ್ನಾಟಕ ಖಾಸಗಿ ಅನುದಾನಿತ ಶೈಕ್ಷಣಿಕ ಸಂಸ್ಥೆಗಳ ಸಿಬ್ಬಂದಿಗಳ (ವೇತನ, ನಿವೃತ್ತಿ ವೇತನ ಮತ್ತು ಇತರೆ ಸೌಲಭ್ಯಗಳ ನಿಯಂತ್ರಣ) ಅಧಿನಿಯಮ 2014ನ್ನು ಜಾರಿಗೊಳಿಸಿದೆ.

ಈ ಅಧಿನಿಯಮವನ್ನು ಅನುದಾನಿತ ಶಿಕ್ಷಣ ಸಂಸ್ಥೆಗಳ ಸಿಬ್ಬಂದಿಗಳು ಪ್ರಶ್ನಿಸಿರುವ ರಿಟ್ ಅರ್ಜಿಗಳಾದ 21216/2014 ಮತ್ತು 14307/2014 ಮತ್ತು ತತ್ಸಂಬಂಧದ ಪ್ರಕರಣಗಳಲ್ಲಿ ಉಚ್ಛ ನ್ಯಾಯಾಲಯವು ದಿನಾಂಕ:10.07.2015ರಂದು ನೀಡಿದ ತೀರ್ಪಿನಲ್ಲಿ ಸದರಿ ಅಧಿನಿಯಮವನ್ನು "struck down" ಮಾಡಿರುತ್ತದೆ.

ಮೇಲಿನ ಮಾನ್ಯ ನ್ಯಾಯಾಲಯದ ತೀರ್ಪನ್ನು ಪ್ರಶ್ನಿಸಿ ಸರ್ಕಾರವು ಮಾನ್ಯ ಉಚ್ಚನ್ಯಾಯಾಲಯ, ಬೆಂಗಳೂರು, ಇಲ್ಲಿ ರಿಟ್ ಅಪೀಲು ಸಂಖ್ಯೆ :2476/2015 ಮತ್ತು 2467/2015ನ್ನು ದಾಖಲಿಸಿದೆ. ಮೇಲಿನ ರಿಟ್ ಅರ್ಜಿಗಳಲ್ಲಿ ನೀಡಿದ ತೀರ್ಪಿಗೆ ದಿನಾಂಕ:27.11.2015ರಂದು ತಡೆಯಾಜ್ಞೆ ಪಡೆಯಲಾಗಿದೆ. ತಡೆಯಾಜ್ಞೆ ಪ್ರಸ್ತುತವು ಜಾರಿಯಲ್ಲಿದ್ದು, ಪ್ರಕರಣವು ಮಾನ್ಯ ನ್ಯಾಯಾಲಯದಲ್ಲಿ ಇನ್ನೂ ಬಾಕಿಯಿರುತ್ತದೆ.

ಸಂಖ್ಯೆ:ಇಪಿ 54 ಎಸ್‌ಇಎಸ್ 2020

(ಎಸ್.ಸುರೇಶ್‌ಕುಮಾರ್)
ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ
ಹಾಗೂ ಸಕಾಲ ಸಚಿವರು.